## ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 475

ವಿಧಾನ ಪರಿಷತ್ತಿನ ಸದಸ್ಯರ ಹೆಸರು : ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು)

ಉತ್ತರಿಸಬೇಕಾದ ದಿನಾಂಕ : 22.12.2022

ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿ.

| ಕ್ರ. ಸಂ | ಪ್ರಶ್ನೆ | ಉತ್ತರ |
|---|---|---|
| ಅ | ರಾಜ್ಯದಲ್ಲಿ ಗ್ರಾಮಾಂತರದ ಗ್ರಾಹಕರಿಗೆ ವ್ಯವಸ್ಥಿತ ರೀತಿಯಲ್ಲಿ ಗೃಹ ಬಳಕೆ ಅಡಿಗೆ ಅನಿಲವನ್ನು (ಎಲ್‌ಪಿಜಿ) ವಿತರಿಸಲು ರಾಜ್ಯ ಸರ್ಕಾರ ಯಾವ ಕ್ರಮಗಳನ್ನು ಕೈಗೊಂಡಿದೆ; (ಪೂರ್ಣ ವಿವರ ನೀಡುವುದು) | ಕೇಂದ್ರ ಸರ್ಕಾರದ ಅಧೀನದ ತೈಲ ಕಂಪನಿಗಳಾದ ಹೆಚ್‌ಪಿಸಿಎಲ್, ಬಿಪಿಸಿಎಲ್ ಮತ್ತು ಐಒಸಿಎಲ್ ರವರ ವತಿಯಿಂದ ಗ್ರಾಮೀಣ ಪ್ರದೇಶದಲ್ಲಿ ಗೃಹ ಬಳಕೆ ಅಡಿಗೆ ಅನಿಲವನ್ನು ತೈಲ ಕಂಪನಿಗಳು ನೇಮಿಸಿರುವ ವಿತರಕರ ಮುಖಾಂತರ ವಿತರಣೆಯನ್ನು ಮಾಡಲಾಗುತ್ತಿದೆ. ಗ್ರಾಮೀಣ ಪ್ರದೇಶದ ಅಡುಗೆ ಅನಿಲ ಗ್ರಾಹಕರು ಅನಿಲ ಸಿಲಿಂಡರ್ ಪೂರೈಕೆಗಾಗಿ ಬೇಡಿಕೆಯನ್ನು ಸಲ್ಲಿಸಿದ್ದಲ್ಲಿ ಅಂತಹ ಗ್ರಾಮೀಣ ಪ್ರದೇಶದ ಗ್ರಾಹಕರಿಗೆ ಅಡುಗೆ ಅನಿಲ ಸಿಲಿಂಡರ್‌ನ್ನು ಅವರ ಮನೆ ಬಾಗಿಲಿಗೆ ವಿತರಿಸಲು ಕ್ರಮವಹಿಸಲಾಗುತ್ತಿದೆ. |
| ಆ | ರಾಜ್ಯದಲ್ಲಿ ವಿತರಿಸಲಾಗುತ್ತಿರುವ ಗೃಹ ಬಳಕೆ ಅನಿಲದ ಮೇಲೆ ಕೇಂದ್ರ ಸರ್ಕಾರ ಶೇ.5 ರಷ್ಟು ಜಿಎಸ್‌ಟಿ ಮತ್ತು ಕಸ್ಟಮ್ ಶುಲ್ಕವನ್ನು ವಿಧಿಸುತ್ತಿದ್ದು, ಇದರಿಂದ ಶ್ರೀ ಸಾಮಾನ್ಯರ ಮೇಲೆ ಆರ್ಥಿಕ ಹೊರೆ ಹೆಚ್ಚುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಪ್ರಸ್ತುತ, ಬಳಸುತ್ತಿರುವ ಗೃಹ ಬಳಕೆ ಅನಿಲದ ಮೇಲೆ ಯಾವುದೇ ಸುಂಕವನ್ನು ವಿಧಿಸುತ್ತಿಲ್ಲ ಹಾಗೂ ಬಡಜನರ ಆರ್ಥಿಕ ಹೊರೆಯನ್ನು ಕಡಿಮೆ ಮಾಡುವ ನಿಟ್ಟಿನಲ್ಲಿ ಕೇಂದ್ರ ಸರ್ಕಾರವು ಬಿಪಿಎಲ್ ಕುಟುಂಬಗಳಿಗೆ ಪ್ರಧಾನ ಮಂತ್ರಿ ಉಜ್ವಲ ಯೋಜನೆಯನ್ನು ಜಾರಿಗೆ ತಂದಿರುತ್ತದೆ. |
| ಇ | ಈ ಹೆಚ್ಚಿನ ಆರ್ಥಿಕ ಹೊರೆಯನ್ನು ಪ್ರಧಾನಮಂತ್ರಿ ಉಜ್ವಲ್ ಯೋಜನೆ ಅಡಿ ಭರಿಸಲಾಗುತ್ತಿದೆಯೇ? (ಹಾಗಿದ್ದಲ್ಲಿ, ಪೂರ್ಣ ವಿವರ ನೀಡುವುದು) | ಪ್ರಧಾನ ಮಂತ್ರಿ ಉಜ್ವಲ ಯೋಜನೆಯಡಿ ಅನಿಲ ಸಂಪರ್ಕವನ್ನು ಕಲ್ಪಿಸಲು ಈ ಕೆಳಕಂಡ ಮಾನದಂಡಗಳನ್ನು ಅನುಸರಿಸಲಾಗುತ್ತಿದೆ.<br>1. ಬಿಪಿಎಲ್ ಪಡಿತರ ಚೀಟಿಯು ವಯಸ್ಕ ಮಹಿಳೆ ಹೆಸರಿನಲ್ಲಿರಬೇಕು ಹಾಗೂ ಕುಟುಂಬದ ಯಾವುದೇ ಸದಸ್ಯರ ಹೆಸರಿನಲ್ಲಿ ಅನಿಲ ಸಂಪರ್ಕವನ್ನು ಪಡೆದಿರಬಾರದು.<br>2. ಸದರಿ ಯೋಜನೆಯಲ್ಲಿ ರೂ.1600/-ಗಳ ಸಹಾಯಧನವನ್ನು ನೀಡಲಾಗುತ್ತಿದೆ. ಗ್ರಾಹಕರು ಹಾಟ್‌ಪ್ಲೇಟ್ ಹಾಗೂ ಸಿಲಿಂಡರ್‌ನ ಮೊದಲನೇ ಸಲದ ಸಂಪೂರ್ಣ ವೆಚ್ಚವನ್ನು ಭರಿಸಬೇಕಾಗುತ್ತದೆ.<br>3. ಗ್ರಾಹಕರು ಮೊದಲು ಮರುಪೂರಣವನ್ನು ಪಡೆದಾಗ ಶೂನ್ಯ ಬಡ್ಡಿದರದಲ್ಲಿ ಹಾಟ್‌ಪ್ಲೇಟ್‌ನ್ನು ಪಡೆಯಲು ಅವಕಾಶವನ್ನು ಕಲ್ಪಿಸಲಾಗಿರುತ್ತದೆ.<br>ಕೇಂದ್ರ ಸರ್ಕಾರವು ಪ್ರಧಾನ ಮಂತ್ರಿ ಉಜ್ವಲ ಯೋಜನೆಯನ್ನು ಕೇಂದ್ರ ಸರ್ಕಾರಿ ಸೌಮ್ಯದ ತೈಲ ಕಂಪನಿಗಳ ಮುಖಾಂತರ ಅನುಷ್ಠಾನಗೊಳಿಸುತ್ತಿದ್ದು, ಇದರಲ್ಲಿ ರಾಜ್ಯ ಸರ್ಕಾರದ ಪಾತ್ರವಿರುವುದಿಲ್ಲ. |

ಕಡತ ಸಂಖ್ಯೆ:ಆನಾಸ 97 ಎಫ್‌ಪಿಪಿ 2022 (ಇ-ಆಫೀಸ್)

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ